**ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. ಇವರ ಅಧ್ಯಕ್ಷತೆಯಲ್ಲಿ ದಿನಾಂಕ 11.05.2017ರಂದು ರುರ್ಬನ್ ಮಿಷನ್, ಸಂಸದ್ ಆದರ್ಶ ಗ್ರಾಮ ಯೋಜನೆ ಮತ್ತು ಮಿಷನ್ ಅಂತ್ಯೋದಯ ಯೋಜನೆಗಳ ಕುರಿತು ನಡೆದ ಸಭೆಯ ನಡವಳಿಗಳು**

**ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಪಟ್ಟಿ ಅನುಬಂಧದಲ್ಲಿ ಲಗತ್ತಿಸಿದೆ**

ಸಭೆಯಲ್ಲಿ ಭಾಗವಹಿಸಿದ್ದ ಅಧಿಕಾರಿಗಳನ್ನು ಸ್ವಾಗತಿಸಲಾಯಿತು.

ಮಾನ್ಯ ಪ್ರಧಾನ ಕಾರ್ಯದರ್ಶಿಗಳು ರುರ್ಬನ್ ಮಿಷನ್, ಸಂಸದ್ ಆದರ್ಶ ಗ್ರಾಮ ಯೋಜನೆ ಮತ್ತು ಮಿಷನ್ ಅಂತ್ಯೋದಯ ಯೋಜನೆಗಳ ಪ್ರಗತಿಯ ಕುರಿತು ಚರ್ಚಿಸಿ ಮಾತನಾಡುತ್ತಾ ಗ್ರಾಮೀಣ ಜನರ ಬಡತನ ನಿರ್ಮೂಲನೆ ಮಾಡುವುದರೊಂದಿಗೆ ಅವರ ಆರ್ಥಿಕ ಜೀವನಮಟ್ಟವನ್ನು ಸುಧಾರಿಸಿ ಅವರನ್ನು ಮುಖ್ಯವಾಹಿನಿಯಲ್ಲಿ ತರುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ರುರ್ಬನ್ ಮಿಷನ್, ಸಂಸದ ಆದರ್ಶ ಗ್ರಾಮ ಯೋಜನೆಯನ್ನು ಅನುಷ್ಠಾನಗೊಳಿಸಿದ್ದು ನಿರೀಕ್ಷಿತ ಪ್ರಮಾಣದಲ್ಲಿ ಸಾಧನೆಯಾಗಿಲ್ಲದಿರುವುದರಿಂದ ಅಸಮದಾನ ವ್ಯಕ್ತಪಡಿಸಿದರು. ಈ ಜನಪರ ಯೋಜನೆಗಳನ್ನು ಇನ್ನು ಮುಂದೆಯಾದರೂ ನಿಗಧಿತ ಕಾಲಾವಧಿಯೊಳಗೆ ಅನುಷ್ಠಾನಗೊಳಿಸಬೇಕಾಗಿದೆ ಎಂದು ತಿಳಿಸಿದರು.

ಹಾಗೆಯೇ ಕೇಂದ್ರ ಸರ್ಕಾರದ ಮಿಷನ್ ಅಂತ್ಯೋದಯ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಬೇಕಾಗಿದ್ದು, ರಾಜ್ಯಮಟ್ಟದಲ್ಲಿ ಸಮರ್ಪಕವಾಗಿ ಅನುಷ್ಠಾನ ಮಾಡಲು ಹಾಗೂ ಕಾಲಕಾಲಕ್ಕೆ ಉಸ್ತುವಾರಿ ನೋಡಿಕೊಳ್ಳಲು ಪ್ರತ್ಯೇಕ ಅಧಿಕಾರಿ ನೇಮಕವಾದರೆ ಸೂಕ್ತವಾಗಿರುತ್ತದೆ ಎಂದು ಸಭೆಯಲ್ಲಿ ತೀರ್ಮಾನಿಸಲಾಯಿತು.

<u>ಸಂಸದ್ ಆದರ್ಶ ಗ್ರಾಮ ಯೋಜನೆ :</u>

ಸಂಸದ್ ಆದರ್ಶ ಗ್ರಾಮ ಯೋಜನೆಯನ್ನು ಇನ್ನು ಮುಂದೆ ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಇವರ ನೇತೃತ್ವದಲ್ಲಿ ಅನುಷ್ಠಾನಗೊಳಿಸುವುದು ಮತ್ತು ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಇವರನ್ನು ಸಂಸದ್ ಆದರ್ಶ ಗ್ರಾಮ ಯೋಜನೆ ಅನುಷ್ಠಾನಕ್ಕೆ ರಾಜ್ಯಮಟ್ಟದ ನೋಡಲ್ ಅಧಿಕಾರಿಯನ್ನಾಗಿ ನೇಮಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ಬಗ್ಗೆ ಅಗತ್ಯ ಆದೇಶ ಹೊರಡಿಸಿ ಸಂಬಂಧಪಟ್ಟ ಕಡತಗಳನ್ನು ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಇವರಿಗೆ ವರ್ಗಾಯಿಸಲು ನಿರ್ದೇಶಕರು(ಸುಗ್ರಾಯೋ)ರವರಿಗೆ ತಿಳಿಸಲಾಯಿತು.

(ಕ್ರಮ : ನಿರ್ದೇಶಕರು(ಸುಗ್ರಾಯೋ))

ಸಂಸದ್ ಆದರ್ಶ ಗ್ರಾಮ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯು ದೆಹಲಿಯಲ್ಲಿ 08.05.2017 ರಂದು ನಡೆದಿದ್ದು, ನಿರ್ದೇಶಕರು(ಸುಗ್ರಾಯೋ) ಇವರ ಬದಲಾಗಿ ಸಭೆಯಲ್ಲಿ ರಾಜ್ಯಮಟ್ಟದ ನೋಡಲ್ ಅಧಿಕಾರಿಯಾಗಿ ಇತ್ತೀಚೆಗೆ ನೇಮಕಗೊಂಡಿದ್ದ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆರವರು ಭಾಗವಹಿಸಿದ್ದು ಪರಿಶೀಲನಾ ಸಭೆಯಲ್ಲಿ ಚರ್ಚಿಸಿದ ಅಂಶಗಳನ್ನು ಸಭೆಗೆ ಮಾಹಿತಿ ನೀಡಿದರು.

- ಯೋಜನೆಗೆ ಹೊರಗುತ್ತಿಗೆ ಆಧಾರದ ಮೇಲೆ ಇಬ್ಬರು ಸಮಾಲೋಚಕರನ್ನು ಉಸ್ತುವಾರಿ ಮತ್ತು ಕಾರ್ಯಕ್ರಮ ಅನುಷ್ಠಾನಕ್ಕಾಗಿ ನಿಗಧಿಪಡಿಸಿದ ಅನುದಾನ ಬಳಸಿಕೊಳ್ಳುವುದು.
- ಯೋಜನೆಯ ಎರಡನೆಯ ಹಂತಕ್ಕೆ ಗ್ರಾಮ ಪಂಚಾಯಿತಿಗಳನ್ನು ಆಯ್ಕೆ ಮಾಡಿಕೊಳ್ಳಲು ಈಗಾಗಲೇ ಆಯ್ಕೆ ಮಾಡಿಕೊಂಡಿರುವ ಮಾನ್ಯ ಸಂಸದರನ್ನು ಹೊರತುಪಡಿಸಿ ಉಳಿದ ಮಾನ್ಯ ಸಂಸದರನ್ನು ಗ್ರಾಮ ಪಂಚಾಯತ್‌ಗಳನ್ನು ಆಯ್ಕೆಮಾಡಿಕೊಳ್ಳಲು ಕ್ರಮವಹಿಸುವುದು.

- ಯೋಜನೆಗೆ ಸಂಬಂಧಿಸಿದ ಮಾಹಿತಿಗಳನ್ನು ಸಕಾಲದಲ್ಲಿ ಯೋಜನೆಯ ವೆಬ್‌ಸೈಟ್‌ಗೆ ಅಪ್‌ಲೋಡ್ ಮಾಡುವುದು.

ಮಾನ್ಯ ಪ್ರಧಾನ ಕಾರ್ಯದರ್ಶಿಗಳು ಈ ಸಂಧರ್ಭದಲ್ಲಿ ಚರ್ಚಿಸುತ್ತಾ ಯೋಜನೆಯನ್ನು ಅನುಷ್ಠಾನಗೊಳಿಸಲು ಜಿಲ್ಲಾಧಿಕಾರಿಗಳ ಬದಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ರವರನ್ನು ಯೋಜನೆಯನ್ನು ಅನುಷ್ಠಾನಗೊಳಿಸಲು ಜಿಲ್ಲಾ ಮಟ್ಟದ ಅನುಷ್ಠಾನಾಧಿಕಾರಿಗಳಾಗಿ ನೇಮಿಸಲು ಆದೇಶಿಸಿದರು.

ಹಾಗೆಯೇ ಜಿಲ್ಲಾ ಮಟ್ಟದ ಅನುಷ್ಠಾನಾಧಿಕಾರಿಗಳಿಗೆ ಪೂರಕವಾಗಿ ಕೆಲಸ ನಿರ್ವಹಿಸಲು ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿಗಳ ಉಪಕಾರ್ಯದರ್ಶಿಗಳು ಅಥವಾ ಯೋಜನಾ ನಿರ್ದೇಶಕರುಗಳನ್ನು ಚಾರ್ಜ್ ಆಫಿಸರ್ಸ್‌ಗಳನ್ನಾಗಿ ಬದಲಾಯಿಸಿ ನೇಮಕಗೊಳಿಸಲು ತೀರ್ಮಾನಿಸಲಾಯಿತು.

ಅದರಂತೆ ಜಿಲ್ಲಾ ಮಟ್ಟದ ಅನುಷ್ಠಾನಾಧಿಕಾರಿಗಳು ಮತ್ತು ಚಾರ್ಜ್ ಆಫಿಸರ್ಸ್‌ಗಳ ಬದಲೀ ನೇಮಕಾತಿ ಕುರಿತು ತಕ್ಷಣವೇ ಆದೇಶ ಹೊರಡಿಸಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮೀಣಾಭಿವೃದ್ಧಿ ಮಂತ್ರಾಲಯಕ್ಕೆ ಮಾಹಿತಿಯನ್ನು ತಿಳಿಸಲು ತೀರ್ಮಾನಿಸಲಾಯಿತು. ಮತ್ತು ಯೋಜನೆ ಕುರಿತು ನವ ದೆಹಲಿಯಲ್ಲಿ ತಾಂತ್ರಿಕ ತರಬೇತಿ ಪಡೆದಿರುವ ಶ್ರೀ ಬಾಹುಬಲಿ, DMIS Coordinator, ಬೆಂಗಳೂರು ನಗರ, ಜಿ.ಪಂ ಇವರ ಸೇವೆಯನ್ನು ಪಡೆಯಲು ತೀರ್ಮಾನಿಸಲಾಯಿತು.

(ಕ್ರಮ : ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ)

**ಮಿಷನ್ ಅಂತ್ಯೋದಯ :**

ಮಿಷನ್ ಅಂತ್ಯೋದಯ ಯೋಜನೆಯ ಕುರಿತು ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಸಭೆಯಲ್ಲಿ ಭಾಗವಹಿಸಿದ್ದ ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಇವರು ಮಿಷನ್ ಅಂತ್ಯೋದಯ ಯೋಜನೆಯ ಮಾರ್ಗಸೂಚಿ, ರೂಪುರೇಷೆ ಮತ್ತು ಅನುಷ್ಠಾನದ ಬಗ್ಗೆ ಸುಧೀರ್ಘವಾಗಿ ಸಭೆಗೆ ಮಾಹಿತಿ ನೀಡಿದರು. ಮಿಷನ್ ಅಂತ್ಯೋದಯ ಯೋಜನೆಯನ್ನು ರಾಜ್ಯದಲ್ಲಿ ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಇವರ ನೇತೃತ್ವದಲ್ಲಿ ಅನುಷ್ಠಾನಗೊಳಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಸಂಸದ್ ಆದರ್ಶ ಗ್ರಾಮ ಯೋಜನೆ ಮತ್ತು ಮಿಷನ್ ಅಂತ್ಯೋದಯ ಯೋಜನೆಗಳನ್ನು ರಾಜ್ಯದಲ್ಲಿ ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಇವರ ನೇತೃತ್ವದಲ್ಲಿ ಅನುಷ್ಠಾನಕ್ಕೆ ತರಲು ಸಭೆಯಲ್ಲಿ ತೀರ್ಮಾನಿಸಿದ್ದು ಇನ್ನು ಮುಂದೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಜಿಲ್ಲಾ ಮಟ್ಟದ ಅನುಷ್ಠಾನಾಧಿಕಾರಿಗಳಾಗಿ ಮತ್ತು ಚಾರ್ಜ್ ಆಫಿಸರ್ಸ್‌ಗಳಾಗಿ ಕಾರ್ಯನಿರ್ವಹಿಸುವ ಉಪಕಾರ್ಯದರ್ಶಿಗಳು/ಯೋಜನಾ ನಿರ್ದೇಶಕರುಗಳಿಗೆ ಯೋಜನೆ ಬಗ್ಗೆ ಸವಿವರವಾದ ಮಾಹಿತಿಯನ್ನು ಪರಿಚಯಿಸುವ ಸಲುವಾಗಿ ಒಂದು ದಿನದ ರಾಜ್ಯಮಟ್ಟದ ಕಾರ್ಯಾಗಾರವನ್ನು ಕೂಡಲೇ ಆಯೋಜಿಸುವಂತೆ ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಇವರಿಗೆ ಸೂಚನೆ ನೀಡಿದರು.

(ಕ್ರಮ : ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ)

**ರುರ್ಬನ್ ಮಿಷನ್ :**

ಈ ಯೋಜನೆಯನ್ನು ಪ್ರಸ್ತುತ ಅಭಿಯಾನ ನಿರ್ದೇಶಕರು, ಎನ್.ಆರ್.ಎಲ್.ಎಂ ಇವರ ಉಸ್ತುವಾರಿಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು ಈ ಯೋಜನೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ ಯೋಜನೆಯನ್ನು ಸಕಾಲದಲ್ಲಿ ಯಶಸ್ವಿಗೊಳಿಸಲು ಅಭಿಯಾನ ನಿರ್ದೇಶಕರು, ಎನ್.ಆರ್.ಎಲ್.ಎಂ ಇವರಿಗೆ ಜವಾಬ್ದಾರಿ ವಹಿಸುವಂತೆ ತಿಳಿಸಲಾಯಿತು.

(ಕ್ರಮ : ಅಭಿಯಾನ ನಿರ್ದೇಶಕರು, ಎನ್.ಆರ್.ಎಲ್.ಎಂ)

ಸಭೆಯನ್ನು ವಂದನಾರ್ಪಣೆಯೊಂದಿಗೆ ಮುಕ್ತಾಯಗೊಳಿಸಲಾಯಿತು.

ಗ್ರಾಅಪ:188:ಗ್ರಾಪಂಅ:2017

(ಡಾ. ಎನ್. ನಾಗಾಂಬಿಕಾ ದೇವಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಗ್ರಾ. & ಪಂ. ರಾಜ್ ಇಲಾಖೆ.